158ನೇ ಮು ಉ SL NO:-13 ದಿ:-10/03/26

# ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಟಿ.ಎನ್. ಜವರಾಯಿಗೌಡ ಇವರು ಶೂನ್ಯ ವೇಳೆ ಪ್ರಸ್ತಾವನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ:** ಕರ್ನಾಟಕ ಕೈಗಾರಿಕೆ ಅಭಿವೃದ್ಧಿ ಮಂಡಳಿ-ಗ್ರಾಮ ಪಂಚಾಯಿತಿಗಳ ನಡುವೆ ತೆರಿಗೆ ಸಮರ ಎಂಬ ಶಿರೋನಾಮೆಯಡಿ ದಿನಾಂಕ:6-3-2026ರ ವಿಜಯ ಕರ್ನಾಟಕ ಪತ್ರಿಕೆಯಲ್ಲಿ ವರದಿಯಾಗಿದೆ. ರಾಜ್ಯದ ವಿವಿಧ ಕೈಗಾರಿಕೆಗಳ ಅಸ್ತಿ ತೆರಿಗೆ ಸಂಗ್ರಹ ವಿಚಾರ ಕೆ.ಐ.ಎ.ಡಿ.ಬಿ. ಮತ್ತು ಗ್ರಾಮ ಪಂಚಾಯಿತಿಗಳ ನಡುವಿನ ಸಮರಕ್ಕೆ ಕಾರಣವಾಗಿದ್ದು, ಕಂಪನಿಗಳು ತೆರಿಗೆಯನ್ನು ಯಾರಿಗೆ ಪಾವತಿಸಬೇಕೆಂದು ಗೊತ್ತಾಗದೆ ಸಂದಿಗ್ಧ ಪರಿಸ್ಥಿತಿಗೆ ಸಿಲುಕಿವೆ. ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಬರುವ ಕೈಗಾರಿಕೆಗಳಿಂದ ತೆರಿಗೆ ಸಂಗ್ರಹಕ್ಕೆ ಮುಂದಾಗಿದ್ದು, ಮತ್ತೊಂದಡೆ ತೆರಿಗೆಯನ್ನು ಕೆ.ಐ.ಎ.ಡಿ.ಬಿ. ಪಾವತಿಸಬೇಕೆಂದು ವರ್ಷದ ಹಿಂದೆಯೇ ಸರ್ಕಾರ ಅಧಿಸೂಚನೆ ಹೊರಡಿಸಿದೆ. ಕಳೆದ ಆರ್ಥಿಕ ವರ್ಷದವರೆಗೂ ತೆರಿಗೆ ಸಂಗ್ರಹದಲ್ಲಿ ಯಾವುದೇ ಗೊಂದಲ ಇರಲಿಲ್ಲ. ತಮ್ಮ ವ್ಯಾಪ್ತಿಯಲ್ಲಿ ಬರುವ ಕೈಗಾರಿಕೆಗಳಿಂದ ಗ್ರಾಮ ಪಂಚಾಯಿತಿಗಳೇ ತೆರಿಗೆ ಸಂಗ್ರಹಹಿಸುತ್ತಿದ್ದವು. ಬೃಹತ್ ಹೂಡಿಕೆ ಪ್ರದೇಶಗಳು ಕೈಗಾರಿಕಾ ಪ್ರದೇಶಗಳನ್ನು ಸ್ಥಾಪಿಸಲು, ಸರ್ಕಾರ ವಿಶೇಷ ಹೂಡಿಕೆ ಪ್ರದೇಶ (ಎಸ್.ಐ.ಆರ್.)ಕಾಯಿದೆ ಜಾರಿಗೆ ತಂದು ರಾಜ್ಯದಲ್ಲಿ ಹೆಚ್ಚು ಆದಾಯ ತರುವ 17 ಕೈಗಾರಿಕಾ ಪ್ರದೇಶಗಳನ್ನು ಎಸ್.ಐ.ಆರ್. ವ್ಯಾಪ್ತಿಗೆ ತಂದು ಸಂಪೂರ್ಣ ಜವಾಬ್ದಾರಿಯನ್ನು ಕೆ.ಐ.ಎ.ಡಿ.ಟಿ.ಗೆ ವಹಿಸಲಾಗಿದೆ. ಸಂಗ್ರಹವಾಗುವ ಒಟ್ಟು ತೆರಿಗೆಯಲ್ಲಿ ಶೇಕಡಾ 30 ರಷ್ಟನ್ನು ಗ್ರಾಮ ಪಂಚಾಯಿತಿಗಳಿಗೆ ನೀಡುವುದಾಗಿ ಕೆ.ಐ.ಡಿ.ಟಿ.ಕಾಯಿದೆಯಲ್ಲಿ ತಿಳಿಸಲಾಗಿತ್ತು. ಆದರೆ ಇದ್ಯಾವುದು ಜಾರಿಗೆ ಬರಲಿಲ್ಲ. ಒಂದು ಕಡೆ ಸರ್ಕಾರ ಪಂಚಾಯಿತಿಗಳಿಗೆ ಅನುದಾನ ನೀಡುತ್ತಿಲ್ಲ. ಇನ್ನೊಂದು ಕಡೆ ಸ್ಥಳೀಯವಾಗಿ ಗ್ರಾಮ ಪಂಚಾಯಿತಿಗಳೇ ಸಂಪನ್ಮೂಲಗಳನ್ನು ಕ್ರೋಢೀಕರಿಸಿಕೊಳ್ಳಬೇಕು ಎಂದು ಹೇಳುತ್ತದೆ. ಪಂಚಾಯತ್ ರಾಜ್ ಕಾಯ್ದೆಯ ಅನುಸಾರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಆಸ್ತಿಗಳಿಂದ ತೆರಿಗೆ ಸಂಗ್ರಹ ಮಾಡುವ ಅಧಿಕಾರ ಗ್ರಾಮ ಪಂಚಾಯಿತಿಗಳಿಗೆ ಇದೆ. ಆದ್ದರಿಂದ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಹಳ್ಳಿಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಮಾಡಲು, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಸಂಪನ್ಮೂಲಗಳನ್ನು ಕ್ರೋಢೀಕರಿಸಲು ಸಾಧ್ಯವಿಲ್ಲ. ಆದ್ದರಿಂದ ಈ ಹಿಂದಿನಂತೆ, ಪಂಚಾಯತ್ ರಾಜ್ ಕಾಯ್ದೆಯಂತೆ, ಗ್ರಾಮ ಪಂಚಾಯಿಗಳ ವ್ಯಾಪ್ತಿಯಲ್ಲಿ ಬರುವ ಕೈಗಾರಿಕೆ ಪ್ರದೇಶಗಳಿಂದ ತೆರಿಗೆಯನ್ನು ಸಂಗ್ರಹಿಸಲು ಗ್ರಾಮ ಪಂಚಾಯಿತಿಗಳಿಗೆ ಅಧಿಕಾರ ನೀಡಿ, ಈ ಸಂದಿಗ್ಧ ಪರಿಸ್ಥಿತಿಯನ್ನು ನಿವಾರಿಸಲು ಸರ್ಕಾರ ತತಕ್ಷಣ ಕ್ರಮ ವಹಿಸಬೇಕು ಎಂಬುದರ ಬಗ್ಗೆ.

*******

**ಉತ್ತರ:** ಭಾರತ ಸಂವಿಧಾನದ ಅನುಚ್ಛೇದ 243-ಹೆಚ್ ರನ್ವಯ ರಾಜ್ಯ ವಿಧಾನ ಮಂಡಲ ಪರಿಮಿತಿಸಿದ ಪ್ರಮಾಣದಲ್ಲಿ ಗ್ರಾಮ ಪಂಚಾಯತಿಗಳು ಗ್ರಾಮ ಪಂಚಾಯತಿ ವ್ಯಾಪ್ತಿಯ ಕಟ್ಟಡಗಳು ಮತ್ತು ನಿವೇಶನಗಳ ಮೇಲೆ ತೆರಿಗೆಯನ್ನು

ವಿಧಿಸಬಹುದಾಗಿದೆ. ಅದರಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 199 ಮತ್ತು ಅನುಸೂಚಿ-IV ರಲ್ಲಿ ನಿರ್ದಿಷ್ಟಪಡಿಸಿರುವಂತೆ ಕಟ್ಟಡಗಳು ಮತ್ತು ನಿವೇಶನಗಳ ಮೇಲೆ ತೆರಿಗೆಯನ್ನು ವಿಧಿಸಿ, ವಸೂಲಿ ಮಾಡಲು ಗ್ರಾಮ ಪಂಚಾಯತಿಗಳಿಗೆ ಅವಕಾಶ ಕಲ್ಪಿಸಲಾಗಿದ್ದು, ಅದರಂತೆ ಅನುಸೂಚಿ-IV ರಲ್ಲಿ ಕೈಗಾರಿಕೆ ಕಟ್ಟಡಗಳು ಮತ್ತು ನಿವೇಶನಗಳ ಮೇಲೆ ತೆರಿಗೆ ಮೊತ್ತವನ್ನು ನಿರ್ಧರಿಸಿ, ಅಧಿಸೂಚಿಸಲಾಗಿದೆ.

ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯಿಂದ ಹೊರಡಿಸಿರುವ The Karnataka Special Investment Region Act, 2022 ರ ಪ್ರಕರಣ 29(4) ರಂತೆ ಕೈಗಾರಿಕಾ ಪಟ್ಟಣವೆಂದು ಘೋಷಣೆಯಾಗಿರುವ ಪ್ರದೇಶಗಳಲ್ಲಿ ದಿನಾಂಕ:01-04-2025 ರಿಂದ ತೆರಿಗೆ ವಸೂಲಾತಿ ಮಾಡುತ್ತಿದ್ದು, ವಸೂಲಿ ಮಾಡಿದ ತೆರಿಗೆಯಲ್ಲಿ ಕೆ.ಐ.ಎ.ಡಿ.ಬಿ. ರವರು ಶೇ 30 ರಷ್ಟನ್ನು ಸಂಬಂಧಿಸಿದ ಗ್ರಾಮ ಪಂಚಾಯತಿಗಳಿಗೆ ಹಂಚಿಕೆ ಮಾಡಲು ಅವಕಾಶ ಕಲ್ಪಿಸಲಾಗಿದೆ. ಅದರಂತೆ, ಪ್ರಸ್ತುತ 18 ವಿಶೇಷ ಹೂಡಿಕೆ ಪ್ರದೇಶ (Special Investment Region) ಗಳಿಂದ ರೂ. 53.26 ಕೋಟಿ ತೆರಿಗೆ ವಸೂಲಿಯಾಗಿದ್ದು, ಸಂಬಂಧಿಸಿದ ಗ್ರಾಮ ಪಂಚಾಯಿತಿಗಳಿಗೆ ಹಂಚಿಕೆ ಮಾಡಲು ಬಾಕಿ ಇರುತ್ತದೆ.

KIADB ರವರು Special Investment Region ವ್ಯಾಪ್ತಿಗೆ ಬರುವ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಮತ್ತಷ್ಟು ಆಸ್ತಿ ತೆರಿಗೆ ಸಂಗ್ರಹಿಸದಂತೆ ಮತ್ತು ಈಗಾಗಲೇ ಸಂಗ್ರಹಿಸಿದ ತೆರಿಗೆಯನ್ನು ಉಪಯೋಗಿಸಿಕೊಳ್ಳುವ ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ದೃಢೀಕರಿಸುವವರೆಗೆ ಅಥವಾ ಪ್ರಸ್ತಾವನೆಗೆ ಸಹಮತಿ ನೀಡುವವರೆಗೆ ಯಾವುದೇ ರೀತಿಯ ಕ್ರಮ ಕೈಗೊಳ್ಳಬಾರದೆಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, KIADB, ರವರಿಗೆ ನಿರ್ದೇಶನ ನೀಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

**ಸಂಖ್ಯೆ:**RDPR 317 GPA 2026.

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.